ದಿನಾಂಕ 30-10-2024 ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನವನ್ನು ಭೋದಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ ಎದುರುದಾರರ ಪರ ಶ್ರೀ ಹೆಚ್.ಎಲ್.ಸಿ ವಕೀಲರಿಂದ.**

ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿ ಅಂಚೆ ಇಲಾಖೆಯವರು ನೋಂದಾಯಿತ ಅಂಚೆ ಲಕೋಟೆಯನ್ನು ನನ್ನ ವಿಳಾಸಕ್ಕೆ ತರದೇ ಇದ್ದರೂ ವಿಳಾಸಕ್ಕೆ ಬಂದಿರುತ್ತೇವೆ ಎಂದು ಸುಳ್ಳಾಗಿ ವರದಿ ಮಾಡಿರುತ್ತಾರೆ ಎಂದು ಪ್ರಮಾಣ ಪತ್ರದಲ್ಲಿ ಬರೆಸಿರುವುದಿಲ್ಲ. ಅಂಚೆ ಇಲಾಖೆಗೆ ಸಂಬಂಧಿಸಿದ ಯಾವುದೇ ದಾಖಲೆಯನ್ನು ನಾನು ಈ ಪ್ರಕರಣದಲ್ಲಿ ಹಾಜರುಪಡಿಸಿಲ್ಲ. ದಾವೆ ನಂಬರ 81/2022 ಕ್ಕೆ ಸಂಬಂಧಿಸಿದಂತೆ ಈ ಅರ್ಜಿಯನ್ನು ಸಲ್ಲಿಸಿರುತ್ತೇನೆ. ಸದರಿ ದಾವೆಯಲ್ಲಿ ನನಗೆ ಸಮನ್ಸ ಬಂದಿರುತ್ತದೆ ಎಂದರೆ ಸರಿಯಲ್ಲ. ಸದರಿ ದಾವೆಯಲ್ಲಿ ಸಮನ್ಸ ಅನ್ನು ಅಂಚೆ ಇಲಾಖೆಯವರು ತೆಗೆದುಕೊಂಡು ಬಂದಿದ್ದು ಅದನ್ನು ಪಡೆಯದೇ ನಾನು ತಿರಸ್ಕರಿಸಿದ್ದರಿಂದ ಅಂಚೆ ಇಲಾಖೆಯವರು ತಿರಸ್ಕರಿಸಿರುತ್ತಾರೆ ಎಂದು ನಮೂದಿಸಿ ಅಂಚೆಯನ್ನು ವಾಪಸ್ಸು ಕಳುಹಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ದಾವೆಯ ಕುರಿತು ಸಂಪೂರ್ಣ ಮಾಹಿತಿ ನನಗೆ ಇದ್ಯಾಗ್ಯೂ ಸುಳ್ಳಾಗಿ ಈ ಅರ್ಜಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಎದುರುದಾರರಿಗೆ ಹಣ ನೀಡಬಾರದು ಎಂಬ ಉದ್ದೇಶದಿಂದ ಸುಳ್ಳು ಅರ್ಜಿ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ.

**(**ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತುಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ**)**

ಓ.ಹೇ.ಕೇ.ಸರಿ.ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,
ದೇವದುರ್ಗ.